# ಜೆಎಸ್‌ಎಸ್ ಮಹಿಳಾ ಕಾಲೇಜು, ಕೊಳ್ಳೇಗಾಲ

## ಅಭಿವೃದ್ಧಿಯ ಹೆಸರಲ್ಲಿ ಪರಿಸರ ನಾಶ, ತಡೆಯದಿದ್ದರೆ ಸರ್ವನಾಶ

ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಸ್ವಚ್ಛತಾ ಅಭಿಯಾನದಲ್ಲಿ ಪ್ರೊ. ಎಂ. ಬಸವರಾಜು

ಕೊಳ್ಳೇಗಾಲ: 15-09-2018 ಪ್ರಗತಿಯ ಸಂಕೇತವಾಗಿರುವ ಆಧುನೀಕರಣ, ನಗರೀಕರಣ, ಕೈಗಾರಿಕೀಕರಣಗಳಿಂದ ಪರಿಸರ ತನ್ನ ಸಮತೋಲನ ಕಳೆದುಕೊಂಡು ಜೀವಸಂಕುಲ ವಿನಾಶದತ್ತ ಹೆಜ್ಜೆ ಹಾಕುತ್ತಿದೆ ಎಂದು ರಾಸೇಯೋ ಕಾರ್ಯಕ್ರಮಾಧಿಕಾರಿ ಪ್ರೊ. ಎಂ. ಬಸವರಾಜು ಅಭಿಮತ ವ್ಯಕ್ತಪಡಿಸಿದರು.

ಇಲ್ಲಿನ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಪರಿಸರ ಸಂರಕ್ಷಣಾ ಸಮಿತಿ ಹಾಗೂ ರಾ.ಸೇ.ಯೋ ಘಟಕಗಳ ವತಿಯಿಂದ ಆಯೋಜಿಸಿದ್ದ ಸ್ವಚ್ಛ ಭಾರತ ಅಭಿಯಾನದ ಸಾಪ್ತಾಹಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಇಂದು ಪರಿಸರ ಸಂರಕ್ಷಣೆಯ ಮೂಲ ಆಶಯಕ್ಕೆ ಧಕ್ಕೆ ತರುವಂತಹ ಯಾವುದೇ ಯೋಜನೆಗಳು ಕಾರ್ಯಗತವಾಗದಿರಲಿ, ನೀರಿನ ಸಂರಕ್ಷಣೆ, ಗಿಡ ಮರಗಳ ಸಂರಕ್ಷಣೆ, ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕೈ ಜೋಡಿಸುವ  ಅವಶ್ಯಕತೆಯಿದ್ದು, ಅದರಲ್ಲೂ ಯುವ ಹಾಗೂ ಬುದ್ಧಿವಂತ ಸಮೂಹವಾದ ವಿದ್ಯಾರ್ಥಿಗಳು ಈ ದಿಶೆಯಲ್ಲಿ ಹೆಚ್ಚಿನ ಒತ್ತು ನೀಡಬೇಕಿದೆ. ಪರಿಸರ ನಾಶದಿಂದ ನಮ್ಮ ಜೀವನ ಕ್ರಮ ತೊಂದರೆಗೆ ಸಿಲುಕುವ ಬಗ್ಗೆ ಗೊತ್ತಿದ್ದರೂ ಪರಿಸರದ ಬಗ್ಗೆ ಕಾಳಜಿಯಿಲ್ಲದಿರುವುದು ವಿಪರ್ಯಾಸ. ನಮ್ಮ ಮುಂದಿನ ಪೀಳಿಗೆ ಸಂತೋಷದಿಂದ ಹಾಗೂ ಆರೋಗ್ಯದಾಯಕವಾಗಿರಬೇಕೆಂದು ಬಯಸುವುದಾದರೆ ಇಂದು ನಾವೆಲ್ಲಾ ಪರಿಸರ ಸಂರಕ್ಷಣೆಯಲ್ಲಿ ಹಾಗೂ ಸ್ವಚ್ಛತಾ ಅಭಿಯಾನದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವ ಅವಶ್ಯಕತೆಯಿದೆ ಎಂದು ಕರೆ ನೀಡಿದರು.

ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು ಪರಿಸರ ಸಂರಕ್ಷಣೆ ಸಮಿತಿ ಸಂಚಾಲಕ ಪ್ರೊ. ಬಿ. ಮಂಜುನಾಥ, ರಾ.ಸೇ.ಯೋ. ಕಾರ್ಯಕ್ರಮಧಿಕಾರಿ ಪ್ರೊ. ಎಂ. ಬಸವರಾಜುರವರ ಮಾರ್ಗದರ್ಶನದಲ್ಲಿ ಸ್ವಚ್ಛತಾ ಕಾರ್ಯ ನಡೆಸಲಾಯಿತು.

## ಸ್ವಚ್ಛತಾ ಅಭಿಯಾನದಲ್ಲಿ ಪಾಲ್ಗೊಂಡಿರುವ ವಿದ್ಯಾರ್ಥಿನಿಯರು






